**ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಕೊಪ್ಪ**

**<u>ಸಿ. ಸಿ. ನಂ.585/2021</u>**

**<u>ಪಿರ್ಯಾಧಿದಾರರುಃ</u>** ಶ್ರೀಮತಿ ಮೈತ್ರಾ ಎಂ.ಪಿ., ಕೋಂ ಗಣೇಶ್ ವಿ., ಸುಮಾರು 48 ವರ್ಷ, ವಾಸ ವೈಭವ್ ನಿಲಯ, ಮಾರುತಿನಗರ, ಹರಂದೂರು ಗ್ರಾಮ, ಕೊಪ್ಪ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.

**-ವಿರುದ್ಧ -**

**<u>ಆರೋಪಿಃ</u>** ಶ್ರೀಮತಿ ಸುಧಾ ಕೋಂ ಶಾಜಿ, ಸುಮಾರು 40 ವರ್ಷ, ವಾಸ ಜಿ.ಜೆ. ರಸ್ತೆ, ಕುವೆಂಪು ನಗರ, ಹರಂದೂರು ಗ್ರಾಮ, ಕೊಪ್ಪ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.

**<u>ಆರೋಪಣೆ</u>**

ಆರೋಪಿಯಾದ ನೀವು ಪಿರ್ಯಾದುದಾರರಿಂದ ಪಡೆದುಕೊಂಡ ಸಾಲವನ್ನು ತೀರುವಳಿ ಮಾಡುವ ಸಲುವಾಗಿ ನೀವು ನಿಮ್ಮ ಬಾಬ್ತು ಅವರಿಗೆ ಚೆಕ್ ನಂ. 776721, ದಿನಾಂಕ 30.12.2020 ನ್ನು ನಮೂದಿಸಿದ ಸಿಂಡಿಕೇಟ್ ಬ್ಯಾಂಕ್ (ಪ್ರಸ್ತುತ ಕೆನರಾ ಬ್ಯಾಂಕ್), ಕೊಪ್ಪ ಶಾಖೆಯ ಒಂದು ಚೆಕ್ಕನ್ನು ನೀಡಿದ್ದು, ಅವರು ಸದರಿ ಚೆಕ್ಕನ್ನು ಅದೇ ಶಾಖೆಗೆ ಹಾಜರುಪಸಿದಾಗ **"Account Closed** "ಎಂಬ ಹಿಂಬರಹದೊಂದಿಗೆ ನೀವು ಕೊಟ್ಟಂತ ಚೆಕ್ ವಾಪಸ್ಸಾಗಿದ್ದು ಸದರಿ ಚೆಕ್ ಅಮಾನ್ಯಗೊಂಡ ಬಗ್ಗೆ ನಿಮ್ಮ ಗಮನಕ್ಕೆ ದಿನಾಂಕ 05.04.2021 ರಂತೆ ವಕೀಲರ ಮುಖಾಂತರ ನೋಟೀಸು ನೀಡಿದ್ದು, ಸದರಿ ನೋಟಿಸು ದಿನಾಂಕ 06.04.2021 ರಂದು ನಿಮಗೆ ಜಾರಿಯಾಗಿದಾಗ್ಯೂ ಸಹ ನೀವು ಚೆಕ್ ಬಾಬ್ತು ಹಣವನ್ನು ನೀಡದೇ ವರ್ಗಾವಣೀಯ ಲಿಖಿತ ಅಧಿನಿಯಮ ಕಲಂ 138 ರ ಅಡಿಯಲ್ಲಿ ಅಪರಾಧವನ್ನು ನನ್ನ ಸಂಜ್ಞೆಯಲ್ಲಿ ಎಸಗಿರುತ್ತೀರಿ.

ಪ್ರಶ್ನೆ 1ಃ- ನಿಮಗೆ ಓದಿ ಹೇಳಿದ ಆರೋಪಣೆ ಅರ್ಥವಾಯಿತೇ?
ಉತ್ತರಃ ತಿಳಿಯಿತು.

ಪ್ರಶ್ನೆ 2ಃ-	ಮೇಲಿನ ಆಪಾಧನೆಯನ್ನು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆಯಾಗಬೇಕೆ?

ಉತ್ತರಃ	ವಿಚಾರಣೆಯಾಗಬೇಕು.

ಮೇಲಿನ ಆರೋಪಣೆಯನ್ನು ಆರೋಪಿಗೆ ಓದಿ ಹೇಳಿದ ನಂತರ ಅವರು ನೀಡಿದ ಉತ್ತರವನ್ನು ಸ್ವತಃ ನಾನೇ ಬರೆದುಕೊಂಡಿರುವುದು ನಿಜವೆಂದು ದೃಡೀಕರಿಸುತ್ತೇನೆ.

ದಿನಾಂಕ 17.09.2025

ಸಹಿ/- 17.09.2025.
(ಶ್ರೀಮತಿ ನಂದಿನಿ ಎಂ.ಎನ್.)
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ.ಕೊಪ್ಪ